**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 235 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:08-08-2019.

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
**ಬೆಂಗಳೂರು.**

**ಇವರಿಗೆ:**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2) ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
3) ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, 4ನೇ ಮಹಡಿ, ಡಾ: ಅಂಬೇಡ್ಕರ್ ವೀಧಿ, ಬೆಂಗಳೂರು-01.
4) ವಿಶೇಷಾಧಿಕಾರಿ, ಆರ್ಥಿಕ ಇಲಾಖೆ (ಜಿ.ಪಂ.), 2ನೇ ಮಹಡಿ, ವಿಧಾನ ಸೌಧ, ಬೆಂಗಳೂರು-01.
5) ಎಲ್ಲಾ ತಾಲ್ಲೂಕು .ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು,

ಮಾನ್ಯರೆ,

**ವಿಷಯ:** ಗ್ರಾಮ ಪಂಚಾಯತಿ ಗ್ರಂಥಾಲಯಗಳ ನಿರ್ವಹಣೆಯನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಾಮ ಪಂಚಾಯತಿಗಳಿಗೆ ವರ್ಗಾಯಿಸಿರುವ ಬಗ್ಗೆ.

**ಉಲ್ಲೇಖ:** ದಿನಾಂಕ:05-08-2019 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ:05-08-2019 ರಂದು ಗ್ರಾಮ ಪಂಚಾಯತಿ ಗ್ರಂಥಾಲಯಗಳ ನಿರ್ವಹಣೆಯನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಾಮ ಪಂಚಾಯತಿಗಳಿಗೆ ವರ್ಗಾಯಿಸಿರುವ ಬಗ್ಗೆ ನಡೆದ ಸಭೆಯ ನಡವಳಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿದೆ. ಸದರಿ ನಡವಳಿಗಳಲ್ಲಿ ತಮಗೆ ಅನ್ವಯಿಸುವ ಅಂಶಗಳಿಗೆ ಸಂಬಂಧಿಸಿದಂತೆ ಕೂಡಲೇ ಕ್ರಮ ಕೈಗೊಂಡು, ಕೈಗೊಂಡಿರುವ ಕ್ರಮದ ಅನುಪಾಲನಾ ವರದಿಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರಿಗೆ ಕೂಡಲೇ ಕಳುಹಿಸಿಕೊಡುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

Narayan Dep.
8/8/19

(ಡಿ.ಜಿ. ನಾರಾಯಣ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ (ಗ್ರಾ.ಪಂ) (ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.</u>

1) ವಿಶೇಷ ಅಧಿಕಾರಿ, ಗಣಕಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರಿಗೆ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
2) ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ:05-08-2019 ರಂದು ಅಪರಾಹ್ನ 3.00 ಗಂಟೆಗೆ ಗ್ರಾಮ ಪಂಚಾಯತಿ ಗ್ರಂಥಾಲಯಗಳ ನಿರ್ವಹಣೆಯನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಾಮ ಪಂಚಾಯತಿಗಳಿಗೆ ವರ್ಗಾಯಿಸಿರುವ ಬಗ್ಗೆ ನಡೆದ ಸಭೆಯ ನಡವಳಿಗಳು.**

ಹಾಜರಿದ್ದವರು:

ಪ್ರತ್ಯೇಕ ಅನುಬಂಧದಲ್ಲಿ ಲಗತ್ತಿಸಿದೆ.

ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯು ದಿನಾಂಕ:27-02-2019 ರಂದು ಗ್ರಾಮ ಪಂಚಾಯತಿ ಗ್ರಂಥಾಲಯಗಳ ನಿರ್ವಹಣೆಯನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯತಿಗಳಿಗೆ ವರ್ಗಾಯಿಸಿದ್ದು, ಈ ಸಂಬಂಧ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ:15-04-2019 ರಂದು ಗ್ರಾಮ ಪಂಚಾಯತಿ ಗ್ರಂಥಾಲಯಗಳ ನಿರ್ವಹಣೆಯನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಾಮ ಪಂಚಾಯತಿಗಳಿಗೆ ವರ್ಗಾಯಿಸಿರುವ ಬಗ್ಗೆ ನಡೆದ ಸಭೆಯ ನಡವಳಿಗಳಿಗೆ ಸಂಬಂಧಿಸಿದಂತೆ ಕೈಗೊಂಡಿರುವ ಕ್ರಮದ ವಿವರದ ಬಗ್ಗೆ ಚರ್ಚಿಸುವ ಸಲುವಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಪಂ.ರಾಜ್-1) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಸಭೆ ಕರೆದಿರುವುದಾಗಿ ತಿಳಿಸಿದರು.

ತದನಂತರ ಸುದೀರ್ಘವಾಗಿ ಚರ್ಚಿಸಿ ಈ ಕೆಳಕಂಡಂತೆ ತೀರ್ಮಾನಿಸಲಾಯಿತು.

1. ಗ್ರಾಮ ಪಂಚಾಯತ್ ಗ್ರಂಥಾಲಯಗಳಿಗೆ ಮೇಲ್ವಿಚಾರಕರ ನೇಮಕಾತಿ ಪ್ರಕ್ರಿಯೆ ಆಯ್ಕೆ ಸಮಿತಿಗೆ ಸಂಬಂಧಿಸಿದ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಸದಸ್ಯರನ್ನಾಗಿ ಮತ್ತು ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ವಿಶೇಷ ಆಹ್ವಾನಿತ ಸದಸ್ಯರಾನ್ನಾಗಿ ನೇಮಿಸಲು ಕ್ರಮ ವಹಿಸುವಂತೆ ತಿಳಿಸಲಾಯಿತು.

   (ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಮತ್ತು ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ)

2. ಪ್ರಸ್ತುತ 5633 ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರಿಗೆ ಮೊದಲನೆ ತ್ರೈಮಾಸಿಕ ಅವಧಿಯವರೆಗೆ ಅಂದರೆ ಮಾರ್ಚ್ 2019 ರಿಂದ ಮೇ 2019 ರವರೆಗೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯು ಸರ್ಕಾರದ ಆದೇಶ ಸಂಖ್ಯೆ:ಇಪಿ 22 ಯೋಯೋಕ 2019, ದಿನಾಂಕ: 07-06-2019 ರಲ್ಲಿ ಗೌರವ ಸಂಭಾವನೆ ಪಾವತಿಸಲು ಆದೇಶದಂತೆ ಕ್ರಮ ವಹಿಸಿದೆ. ಹೊರಡಿಸಲಾಗಿರುತ್ತದೆ. ಜೂನ್-2019 ರಿಂದ ಸೆಪ್ಟೆಂಬರ್ 2019 ರವರೆಗೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯು ಗ್ರಂಥಾಲಯ ಮೇಲ್ವಿಚಾರಕರಿಗೆ ಗೌರವ ಸಂಭಾವನೆ ಪಾವತಿಸಲು ಕ್ರಮ ವಹಿಸುವುದು ಸೂಕ್ತವೆಂದು ಆರ್ಥಿಕ ಇಲಾಖೆಯ ವಿಶೇಷ ಅಧಿಕಾರಿಗಳು ತಿಳಿಸಿದರು. ಅಕ್ಟೋಬರ್ 2019 ರ ನಂತರ ಗ್ರಂಥಾಲಯ ಮೇಲ್ವಿಚಾರಕರಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮೂಲಕ ವೇತನ ಪಾವತಿಸಲು Recipient ID's ಗಳನ್ನು ಮತ್ತು ಗೌರವ ಸಂಭಾವನೆ ವಿವರವನ್ನು ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ ರವರು ಹಣಕಾಸು ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ನೀಡಿದಲ್ಲಿ ಆರ್ಥಿಕ ಇಲಾಖೆಯು ಪೂರಕ ಅಂದಾಜಿನಡಿ ಹೊಸ ಲೆಕ್ಕ ಶೀರ್ಷಿಕೆ ನೀಡಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮೂಲಕ ಗ್ರಂಥಾಲಯ ಮೇಲ್ವಿಚಾರಕರಿಗೆ ಗೌರವಧನ ಬಿಡುಗಡೆ ಮಾಡಲು

(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಮತ್ತು ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ)

3. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ವಯಸ್ಕರ ಶಿಕ್ಷಣ ಸಮಿತಿ ಮತ್ತು ಗ್ರಂಥಾಲಯ ಸಮಿತಿಗಳನ್ನು ಒಗ್ಗೂಡಿಸಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 61(ಎ) ರಡಿ ಉಪ ಸಮಿತಿಯಾಗಿ ಪರಿಗಣಿಸಲು ಕ್ರಮ ವಹಿಸುವುದು ಹಾಗೂ ಅನುದಾನ, ತರಬೇತಿ ಮತ್ತು ಕಿರುಹೊತ್ತಿಗೆ ಮಸ್ತಕ (ಎಫ್‌ಎಕ್ಯೂ) ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ನೀಡಲು ಕ್ರಮ ವಹಿಸುವಂತೆ ತಿಳಿಸಲಾಯಿತು.

(ಕ್ರಮ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ)

4. ಸಾರ್ವಜನಿಕ ಗ್ರಂಥಾಲಯ ಇಲಾಖೆಯ ವಶದಲ್ಲಿರುವ ಗ್ರಾಮ ಪಂಚಾಯತಿಗಳ ಗ್ರಂಥಾಲಯ ಕಟ್ಟಡಗಳನ್ನು ಸಂಬಂಧಿಸಿದ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹೆಸರಿಗೆ ದಿನಾಂಕ:15–08–2019 ರೊಳಗಾಗಿ ವರ್ಗಾವಣೆ ಮಾಡಲು ಕ್ರಮವಹಿಸುವಂತೆ ತಿಳಿಸಲಾಯಿತು.

(ಕ್ರಮ: ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ ಮತ್ತು ನಿರ್ದೇಶಕರು (ಪಂ.ರಾಜ್–1), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ)

5. ಗ್ರಾಮ ಪಂಚಾಯತಿ ಗ್ರಂಥಾಲಯಗಳಿಗೆ ಕಟ್ಟಡ ನಿರ್ಮಿಸಲು ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಬಗ್ಗೆ ವಿಕಲಚೇತನರ ಸ್ನೇಹಿಯಾಗಿ ಮತ್ತು ಶೌಚಾಲಯ ವ್ಯವಸ್ಥೆಯೊಂದಿಗೆ 4–5 ಮಾದರಿ ಗ್ರಂಥಾಲಯಗಳ ವಿವರಗಳನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆ ರವರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದವರಿಂದ ಮಾಹಿತಿ ಒದಗಿಸುವಂತೆ ತಿಳಿಸಲಾಯಿತು.

(ಕ್ರಮ: ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ)

6. ಗ್ರಾಮ ಪಂಚಾಯತಿ ಗ್ರಂಥಾಲಯ ಕಟ್ಟಡಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಸಭೆ ಸೇರಿ ಪ್ರಗತಿ ಪರಿಶೀಲನೆ ಮಾಡುವುದು ಮತ್ತು ಪ್ರಸ್ತುತ ಪ್ರಾರಂಭಗೊಂಡಿರುವ ಗ್ರಂಥಾಲಯ ಕಾಮಗಾರಿ ಕಟ್ಟಡಗಳನ್ನು ಡಿಸೆಂಬರ್ 2019 ರೊಳಗೆ ಮುಕ್ತಾಯಗೊಳಿಸಿ ಗ್ರಾಮ ಪಂಚಾಯತಿಗಳಿಗೆ ಹಸ್ತಾಂತರಿಸಿ ಗ್ರಂಥಾಲಯ ಕಛೇರಿ ಕಟ್ಟಡಗಳು ಕಾರ್ಯನಿರ್ವಹಿಸಲು ಕ್ರಮ ಕೈಗೊಳ್ಳಲು ತಿಳಿಸಲಾಯಿತು.

(ಕ್ರಮ: ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ)

7. ದಿನಾಂಕ:31–03–2019 ರ ಅಂತ್ಯಕ್ಕಿರುವಂತೆ ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಾಮ ಪಂಚಾಯತಿ ಗ್ರಂಥಾಲಯಗಳಲ್ಲಿ ಲಭ್ಯವಿರುವ ಮಸ್ತಕಗಳು, ವಿವಿಧ ಪೀಠೋಪಕರಣಗಳು, ಸದಸ್ಯತ್ವ ಮತ್ತು ಠೇವಣಿ ವಿವರವನ್ನು ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ ರವರು ನೀಡಿದ್ದು, ಸಂಬಂಧಿಸಿದ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಕಳುಹಿಸುವುದು. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಮುಖ್ಯ ಗ್ರಂಥಾಲಯ ಅಧಿಕಾರಿ ಹಾಗೂ ಗ್ರಂಥಾಲಯ ಮೇಲ್ವಿಚಾರಕರ ಸಮ್ಮುಖದಲ್ಲಿ ಸಂಬಂಧಿಸಿದ ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ದಿನಾಂಕ:15–08–2019 ರೊಳಗಾಗಿ ವರ್ಗಾಯಿಸಲು ಕ್ರಮವಹಿಸುವಂತೆ ತಿಳಿಸಲಾಯಿತು.

(ಕ್ರಮ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ನಿರ್ದೇಶಕರು, ಸಾರ್ವಜನಿಕ /

8. ಗ್ರಾಮ ಪಂಚಾಯತಿ ಗ್ರಂಥಾಲಯಗಳಿಗೆ ಸಾರ್ವಜನಿಕರು ಹಾಗೂ ದಾನಿಗಳಿಂದ ಉಪಯುಕ್ತ ಪುಸ್ತಕ ಹಾಗೂ ರ್‍ಯಾಕ್‌ಗಳನ್ನು ದಾನವಾಗಿ ಪಡೆಯಲು ಅಂತಹ ದಾನಿಗಳ ಹೆಸರನ್ನು ಆ ರ್‍ಯಾಕ್‌ಗಳ ಮೇಲೆ ನಮೂದಿಸಲು ಕ್ರಮ ವಹಿಸುವುದು.

**(ಕ್ರಮ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ)**

9. ಕೆಲವು ಜಿಲ್ಲೆಗಳಲ್ಲಿ ಮೇಲ್ವಿಚಾರಕರ ಸ್ಥಾನಕ್ಕೆ ಆಯ್ಕೆ ಕುರಿತಂತೆ ವಿವಿಧ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಮತ್ತು ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಕ್ರಮ ವಹಿಸುವಂತೆ ತಿಳಿಸಲಾಯಿತು.

**(ಕ್ರಮ: ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಮತ್ತು ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ)**

10. ದಿನಾಂಕ:31-03-2019 ರ ಅಂತ್ಯಕ್ಕಿರುವಂತೆ ಒಟ್ಟು 2378 ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರು ಗ್ರಂಥಾಲಯ ವಿಜ್ಞಾನ ತರಬೇತಿ ನೀಡಲಾಗಿದ್ದು, ಇನ್ನುಳಿದವರಿಗೆ ತರಬೇತಿ ನೀಡಲು ಕ್ರಮ ವಹಿಸುವಂತೆ ತಿಳಿಸಲಾಯಿತು.

**(ಕ್ರಮ: ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ)**

11. ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಫೆಬ್ರವರಿ 2019 ರ ಅಂತ್ಯಕ್ಕೆ ಗ್ರಾಮ ಪಂಚಾಯತಿಗಳು ಪಾವತಿಸಬೇಕಾಗಿರುವ ಗ್ರಂಥಾಲಯ ಕರದ ವಿವರವನ್ನು ಒದಗಿಸಿದ್ದು, ಈ ಹಿಂದಿನ ಗ್ರಂಥಾಲಯ ಉಪಕರವನ್ನು ಗ್ರಾಮ ಪಂಚಾಯತಿ ಗ್ರಂಥಾಲಯ ಕಟ್ಟಡ ನಿರ್ಮಾಣ ಮತ್ತು ನಿರ್ವಹಣೆಗಾಗಿ ಉಪಯೋಗಿಸಿಕೊಳ್ಳುವ ಬಗ್ಗೆ ಕ್ರಮ ತೆಗೆದುಕೊಳ್ಳಬಹುದಾಗಿದೆ ಎಂದು ತಿಳಿಸಲಾಯಿತು.

**(ಕ್ರಮ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ)**

12. ಗ್ರಾಮ ಪಂಚಾಯತಿ ಗ್ರಂಥಾಲಯಗಳ ನಿರ್ವಹಣೆಯನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮೂಲಕ ಗ್ರಾಮ ಪಂಚಾಯತಿಗಳಿಗೆ ವರ್ಗಾಯಿಸಿ ಹೊರಡಿಸಲಾಗಿರುವ ಸರ್ಕಾರದ ಆದೇಶಕ್ಕೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಗ್ರಾಮೀಣ ಗ್ರಂಥಾಲಯಗಳ ನೌಕರರ ಸಂಘದವರು ರಿಟ್ ಅರ್ಜಿ ಸಂಖ್ಯೆ:11770/2019 ನ್ನು ದಾಖಲಿಸಿದ್ದು, ಈ ಬಗ್ಗೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಿಂದ ಕ್ರಮ ವಹಿಸುವಂತೆ ತಿಳಿಸಲಾಯಿತು. ಈ ಬಗ್ಗೆ ಕೈಗೊಂಡಿರುವ ಕ್ರಮದ ಮಾಹಿತಿಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಒದಗಿಸುವಂತೆ ತಿಳಿಸಲಾಯಿತು.

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಮತ್ತು ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ)**

13. 463 ಹೊಸ ಗ್ರಾಮ ಪಂಚಾಯತಿಗಳಲ್ಲಿ ಗ್ರಾಮ ಪಂಚಾಯತಿ ಗ್ರಂಥಾಲಯಗಳಿಗೆ ಕಛೇರಿ ಕಟ್ಟಡ ನಿರ್ಮಾಣ ಮಾಡುವ ಬಗ್ಗೆ 14ನೇ ಹಣಕಾಸು, 15ನೇ ಹಣಕಾಸು ಮತ್ತು ಗ್ರಾಮ ಪಂಚಾಯತಿ ಸ್ವಂತ ಸಂಪನ್ಮೂಲದಲ್ಲಿ ಉಪಯೋಗಿಸಿಕೊಳ್ಳಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲು ಮತ್ತು ಕಟ್ಟಡ ನಿರ್ಮಾಣಕ್ಕಾಗಿ ತಗಲುವ ಅಂದಾಜು ವೆಚ್ಚದ ವಿವರವನ್ನು ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ ರವರು ಒದಗಿಸಲು ಕ್ರಮ ಕೈಗೊಳ್ಳುವಂತೆ ಕೋರಿದರು.

**(ಕ್ರಮ: ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ವಿಶೇಷಾಧಿಕಾರಿ ಆರ್ಥಿಕ ಇಲಾಖೆ)**

14. ಗ್ರಾಮ ಪಂಚಾಯತಿ ಗ್ರಂಥಾಲಯಗಳ ಮೇಲ್ವಿಚಾರಣೆಯನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದಲೇ ನಿರ್ವಹಿಸುವಂತೆ ತಿಳಿಸಲಾಯಿತು.

**(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಮತ್ತು ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ)**

ಸಂಖ್ಯೆ: ಗ್ರಾಅಪ 235 ಗ್ರಾಪಂಅ 2019
C.No. 119754

(ಉಮಾಮಹದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.